## 83. ಸ್ಫೋಟಗೊಂಡ ಕಿಟ್ ಅವ್ಯವಹಾರ ಆರೋಪ

ನಗರದಲ್ಲಿನ ವಲಸೆ ಕಾರ್ಮಿಕರಿಗೆ ಆಹಾರದ ಕಿಟ್ ಹಂಚಿಕೆಯಲ್ಲಿನ ಅವ್ಯವಹಾರ ಆರೋಪ ಬಿಬಿಎಂಪಿ ಮಾಸಿಕ ಸಭೆಯಲ್ಲಿ ಕೋಲಾಹಲ ಸೃಷ್ಟಿಸಿತು. ಸುಮಾರು ಮೂರು ತಿಂಗಳ ನಂತರ ನಡೆದ ಮಾಸಿಕ ಸಭೆ ಆರಂಭವಾಗುತ್ತಿದ್ದಂತೆ ಪ್ರತಿಪಕ್ಷದ ನಾಯಕರು ಕೊರೊನಾ ತುರ್ತು ಅನುದಾನದಲ್ಲಿ ದುರ್ಬಳಕೆ ಆಗಿರುವ ಬಗ್ಗೆ ವಿಷಯ ಹೊತ್ತಿಸಿತು. ಪರಿಣಾಮ ಆರೋಪ–ಪ್ರತ್ಯಾರೋಪಗಳಲ್ಲೇ ಸಭೆ ಅಂತ್ಯಗೊಂಡಿತು.

2020–21ನೇ ಸಾಲಿನ ಪಾಲಿಕೆ ಆಯವ್ಯಯದಲ್ಲಿ ಸೋಂಕು ನಿರ್ವಹಣೆಗೆ ಮೀಸಲಿಟ್ಟ ಅನುದಾನ ಇನ್ನು ಬಿಡುಗಡೆಯಾಗಿಲ್ಲ, ಕೇಂದ್ರ ಸರ್ಕಾರದ 20 ಲಕ್ಷ ಕೋಟಿ ರೂ. ಪ್ಯಾಕೇಜ್ ಕೇವಲ ಹೆಸರಿಗಷ್ಟೇ. ಇದೊಂದು ಹಗರಣ' ಎಂದು ವಿರೋಧ ಪಕ್ಷದ ನಾಯಕ ಅಬ್ದುಲ್ ವಾಜಿದ್ ಗಂಭೀರ ಆರೋಪ ಮಾಡಿದರು. ಆಕ್ಷೇಪ ವ್ಯಕ್ತಪಡಿಸಿದ ಆಡಳಿತ ಪಕ್ಷದ ನಾಯಕರು, 'ಹಗರಣವಾಗುವುದಕ್ಕೆ ಇದೇನೂ 2ಜಿ ಅಲ್ಲ' ಎಂದು ತಿರುಗೇಟು ನೀಡಿದರು.

ಬಿಬಿಎಂಪಿ ಆಯುಕ್ತ ಬಿ.ಎಚ್.ಅನಿಲ್‌ಕುಮಾರ್ ಮಾತನಾಡಿ, 'ನಗರದಲ್ಲಿನ ವಲಸೆ ಕಾರ್ಮಿಕರಿಗೆ ಆಹಾರದ ಕಿಟ್ ನೀಡಲು ನಿರ್ಧರಿಸಲಾಯಿತು. ಇದರಲ್ಲಿ ಯಾವುದೇ ಲೋಪವಾಗಿಲ್ಲ' ಪಾರದರ್ಶಕವಾಗಿ ಆಹಾರದ ಕಿಟ್ ಹಂಚಲಾಗಿದೆ ಎಂದು ಸ್ಪಷ್ಟನೆ ನೀಡಿದರು.

ಅಕ್ಷಯ ಪಾತ್ರೆ ಪ್ರತಿಷ್ಠಾನದ ಮೂಲಕ ಒಂದು ಲಕ್ಷ ವಲಸೆ ಕಾರ್ಮಿಕರಿಗೆ ಆಹಾರದ ಕಿಟ್ ನೀಡಲು ನಿರ್ಧರಿಸಲಾಯಿತು. ಇದರಲ್ಲಿ 5 ಕೆ.ಜಿ. ಅಕ್ಕಿ, ಎರಡು ಕೆ.ಜಿ.ಬೇಳೆ, ಅರ್ಧ ಲೀ. ಅಡುಗೆ ಎಣ್ಣೆ, ಚನ್ನದಾಲ್ ಅರ್ಧ ಕೆ.ಜಿ, ಖಾರದ ಪುಡಿ ಮತ್ತು ಉಪ್ಪು, ಸಕ್ಕರೆ ಅರ್ಧ ಕೆ.ಜಿ. ಹಾಗೂ ರಸಂ ಪೌಡರ್ ಒಳಗೊಂಡ ಆಹಾರದ ಕಿಟ್ ನೀಡಲಾಗಿದೆ. 5 ಕೆ.ಜಿ. ಅಕ್ಕಿಯನ್ನು ಕರ್ನಾಟಕ ಆಹಾರ ಸರಬರಾಜು ವೆಚ್ಚ ತೆಗೆದುಕೊಂಡರೆ ಕಡಿಮೆ ಬೆಲೆ ಬೀಳಲಿದೆ ಎನ್ನುವ ಉದ್ದೇಶದಿಂದ ಖರೀದಿಸಲಾಯಿತು. ಅಕ್ಷಯ ಪಾತ್ರೆಯಿಂದ ಹಂಚಿಕೆ ಮಾಡಲಾದ ಒಂದು ಲಕ್ಷ ಕಿಟ್‌ನಲ್ಲಿ 80 ಸಾವಿರ ಕಿಟ್‌ಗಳಿಗೆ ಕಾರ್ಮಿಕ ಇಲಾಖೆಯಿಂದ ಹಣ ನೀಡಲಾಗಿದೆ. ಉಳಿದ 20 ಸಾವಿರ ಆಹಾರದ ಕಿಟ್‌ಗಳನ್ನು ಮಾತ್ರ ಅಕ್ಷಯ ಪಾತ್ರೆ ಉಚಿತವಾಗಿ ನೀಡಿದೆ ಎಂದು ಮಾಹಿತಿ ನೀಡಿದರು.

ಕಾರ್ಮಿಕ ಇಲಾಖೆಯಲ್ಲಿ 68 ಸಾವಿರ ಜನ ಮಾತ್ರ ಹೆಸರು ನೋಂದಾಯಿಸಿ ಕೊಂಡಿದ್ದಾರೆ. ಇದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ವಲಸೆ ಕಾರ್ಮಿಕರು ಇರುವ ಹಿನ್ನೆಲೆಯಲ್ಲಿ ಬಿಬಿಎಂಪಿ ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ ಆಹಾರದ ಕಿಟ್ ನೀಡಿದ್ದಾರೆ. ಮೊದಲ ಹಂತದಲ್ಲಿ 1,44,321 ಜನರ ಪಟ್ಟಿ ಮಾಡಿಕೊಳ್ಳಲಾಗಿತ್ತು. ಇಷ್ಟು ಜನರಿಗೆ ಆಹಾರ ಕಿಟ್ ಅನ್ನು ಕೇವಲ ಅಕ್ಷಯ ಪಾತ್ರೆಯಿಂದ ನೀಡುವುದು ತಡವಾಗುವ ಸಾಧ್ಯತೆ ಇದ್ದ ಹಿನ್ನೆಲೆಯಲ್ಲಿ ಮೆಟ್ರೋ ಕ್ಯಾಶ್ ಅಂಡ್ ಕ್ಯಾರಿ ಹಾಗೂ ಶ್ರೀಶಕ್ತಿ ಟ್ರೇಡರ್ಸ್‌ಗಳಿಗೆ ಆಹಾರದ ಕಿಟ್ ನೀಡುವ ಜವಾಬ್ದಾರಿ ನೀಡಲಾಯಿತು ಎಂದರು.

ಕಾರ್ಡ್ ಇಲ್ಲದವರೂ ಇದ್ದ ಹಿನ್ನೆಲೆಯಲ್ಲಿ ಎರಡನೇ ಹಂತದಲ್ಲಿ 1,8,111 ಜನರನ್ನು ಗುರುತಿಸಲಾಯಿತು. ಒಬ್ಬ ವಲಸೆ ಕಾರ್ಮಿಕರಿಗೆ 2 ದಿನಗಳಿಗಾಗುವಷ್ಟು ಆಹಾರದ ಕಿಟ್ ನೀಡಲಾಗುತ್ತಿದೆ. ಎರಡನೇ ಹಂತದಲ್ಲಿ 41,954 ಎಂದು ಗುರುತಿಸಲಾಗಿದೆ. ಇದಲ್ಲದೆ, ಕಂಟೈನ್ಮೆಂಟ್ ವಲಯಗಳಲ್ಲಿ ಪಡಿತರ ಚೀಟಿ ಇಲ್ಲದ 99 ಸಾವಿರ ಆಹಾರದ ಕಿಟ್ ಬೇಕಾಗುತ್ತದೆ ಎನ್ನುವುದು ಗುರುತಿಸಲಾಯಿತು. ಒಟ್ಟಾರೆ 3,93,415 ಕಿಟ್ ಬೇಕಾಗುತ್ತದೆ. ಇದರಲ್ಲಿ ಬಿಬಿಎಂಪಿಯಿಂದ 3.7 ಲಕ್ಷ ಆಹಾರದ ಕಿಟ್ ಹಾಗೂ ಕಾರ್ಮಿಕ ಇಲಾಖೆಯಿಂದ 68 ಸಾವಿರ ಕಿಟ್ ನೀಡಿದ್ದಾರೆ. ಒಟ್ಟಾರೆ 3,74 ಲಕ್ಷ ಆಹಾರದ ಕಿಟ್ ಹಂಚಿಕೆ ಮಾಡಲಾಗಿದೆ. ಈ ಕುರಿತು ವಿವರ ನೀಡಲಾಗುತ್ತದೆ ಎಂದರು.

ನಗರದಲ್ಲಿ ವಲಸೆ ಕಾರ್ಮಿಕರಿಗೆ ಆಹಾರದ ಕಿಟ್ ನೀಡುವ ವಿಚಾರದಲ್ಲಿ ಪಾಲಿಕೆಯಿಂದ ದೊಡ್ಡಮಟ್ಟದಲ್ಲಿ ಅವ್ಯವಹಾರವಾಗಿದೆ. ಈ ಬಗ್ಗೆ ಉನ್ನತ ಮಟ್ಟದ ತನಿಖೆಯಾಗಬೇಕು ಎಂದು ಪಾಲಿಕೆಯ ವಿರೋಧ ಪಕ್ಷದ ನಾಯಕರು ಆಗ್ರಹಿಸಿ ಪ್ರತಿಭಟಿಸಿದರು. ಪ್ರತಿಭಟನೆ ವೇಳೆ ಸಾಮಾಜಿಕ ಅಂತರ ಕಾಯ್ದುಕೊಂಡಿಲ್ಲ ಹಾಗೂ ಮಾಸ್ಕ್ ಧರಿಸಿಲ್ಲ ಎಂಬ ಆರೋಪದ ಹಿನ್ನೆಲೆಯಲ್ಲಿ ಪೊಲೀಸರು ಬಿಬಿಎಂಪಿ ವಿರೋಧ ಪಕ್ಷದ ನಾಯಕ ಅಬ್ದುಲ್ ವಾಜಿದ್ ಸೇರಿ ಆರು ಜನ ಕಾಂಗ್ರೆಸ್ ಸದಸ್ಯರಿಗೆ ನೋಟಿಸ್ ಜಾರಿಯಾಗಿದೆ.